**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾದಂ., ರವರ ನ್ಯಾಯಾಲಯ, ತರೀಕೆರೆ**

**ಸಂಚಾರಿ ನ್ಯಾಯಾಲಯ, ಅಜ್ಜಂಪುರ**

**ಸಿ.ಸಿ.ನಂಃ 1351/2023**

**ಫಿರ್ಯಾದುದಾರುಃ** ಸರ್ಕಾರದ ಪರವಾಗಿ ಅಜ್ಜಂಪುರ ಪೊಲೀಸರು

:**ವಿರುದ್ಧ:**

**ಆರೋಪಿಃ** ಶ್ರೀ ಜಗದೀಶ್.ಡಿ.ಆರ್,
ಬಿನ್ ಶ್ರೀ ರೇವಣ್ಣ.ಸಿ.ಹೆಚ್,
32 ವರ್ಷ,
ವಾಸ : ಸಿದ್ದರಹಳ್ಳಿ ಗ್ರಾಮ,
ದುಗ್ಲಾಪುರ ಅಂಚೆ,
ತರೀಕೆರೆ ತಾಲ್ಲೂಕು.

**ಆಪಾದನೆಯ ಸಾರಾಂಶ**

ಶ್ರೀ. ರಾಹುಲ್ ಶೆಟ್ಟಿಗಾರ್, ಬಿ.ಕಾಂ.(Hons.), ಎಲ್‌ಎಲ್.ಬಿ., ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾದಂ., ತರೀಕೆರೆ ಆದ ನಾನು ಆರೋಪಿಯಾದ ನಿಮ್ಮ ಮೇಲೆ ಮಾಡುವ ಆರೋಪಣೆ ಏನೆಂದರೆಃ

ದಿನಾಂಕ 27.01.2023 ರಂದು ಮಧ್ಯಾಹ್ನ 2.15 ಗಂಟೆಗೆ ಅಜ್ಜಂಪುರ ಪೋಲೀಸ್ ಠಾಣಾ ಸರಹದ್ದಿನ ಹುಣಸಘಟ್ಟ ಹೊಸನಗರದ ಬಳಿ ನೀವು ಆರೋಪಿ ಕೆಎ.18.ಪಿ.5534 ರ ಪೋರ್ಡ್ ಕಾರನ್ನು ಹುಣಸಘಟ್ಟ ಕಡೆಯಿಂದ ಅತೀವೇಗ ಹಾಗೂ ಅಜಾಗರೂಕತೆಯಿಂದ ಚಾಲನೆ ಮಾಡಿಕೊಂಡು ಬಂದು ಮೃತ ಓಂಕಾರಸ್ವಾಮಿ ಇವರು ಚಾಸಾ–12/ ಶ್ರೀ ಮೋಹನನಾಯ್ಕ ಇವರನ್ನು ಹಿಂಬದಿಯಲ್ಲಿ ಕೂರಿಸಿಕೊಂಡು ಹುಣಸಘಟ್ಟ ಕಡೆಗೆ ರಸ್ತೆಯ ಎಡಬದಿಯಲ್ಲಿ ಚಾಲನೆ ಮಾಡುತ್ತಿದ್ದ ಕೆಎ.18.ವಿ.2742 ರ ಮೋಟಾರು ಬೈಕಿಗೆ ಡಿಕ್ಕಿ ಹೊಡೆಸಿರುತ್ತೀರಿ. ಈ ರೀತ್ಯ ಆರೋಪಿಯಾದ ನೀವು ಭಾರತ ದಂಡ ಸಂಹಿತೆ ಕಲಂ 279 ರ ಅನ್ವಯ ದಂಡನೀಯವಾದ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆಯದೊಳಗೆ ಮಾಡಿರುತ್ತೀರಿ ಎಂದು ಆಪಾದಿಸಲಾಗಿದೆ.

ಎರಡನೆಯದಾಗಿ, ಮೇಲೆ ಹೇಳಿದ ದಿನಾಂಕ, ವೇಳೆ ಮತ್ತು ಸ್ಥಳದಲ್ಲಿ ನೀವು ಆರೋಪಿ ಮೇಲ್ಕಂಡ ವಾಹನವನ್ನು ಅತೀವೇಗವಾಗಿ ಮತ್ತು ಅಜಾಗರೂಕತೆಯಿಂದ ಚಾಲನೆ ಮಾಡಿಕೊಂಡು ಬಂದು ಕೆಎ.18.ವಿ.2742 ರ ಮೋಟಾರು ಬೈಕಿಗೆ ಡಿಕ್ಕಿ ಹೊಡೆಸಿದ ಪರಿಣಾಮ ಮೋಟಾರು ಬೈಕಿನ ಹಿಂಬದಿಯಲ್ಲಿ ಕುಳಿತಿದ್ದ ಚಾಸಾ–12 ರವರ ಬಲಕಾಲು, ಎಡಕೈ, ಹಣೆ, ದವಡೆ ಮತ್ತು ಎಡಕಿವಿಗೆ ತೀವ್ರ ಸ್ವರೂಪದ ಗಾಯಗಳಾಗಿರುತ್ತವೆ. ಈ ರೀತ್ಯ ಆರೋಪಿಯಾದ ನೀವು ಭಾರತ ದಂಡ ಸಂಹಿತೆ ಕಲಂ 338 ರ ಅನ್ವಯ ದಂಡನೀಯವಾದ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆಯದೊಳಗೆ ಮಾಡಿರುತ್ತೀರಿ ಎಂದು ಆಪಾದಿಸಲಾಗಿದೆ.

ಕೊನೆಯದಾಗಿ, ಮೇಲೆ ಹೇಳಿದ ದಿನಾಂಕ, ವೇಳೆ ಮತ್ತು ಸ್ಥಳದಲ್ಲಿ ನೀವು ಆರೋಪಿ ಮೇಲ್ಕಂಡ ವಾಹನವನ್ನು ಅತೀವೇಗವಾಗಿ ಮತ್ತು ಅಜಾಗರೂಕತೆಯಿಂದ ಚಾಲನೆ ಮಾಡಿಕೊಂಡು ಬಂದು ಕೆಎ.18.ವಿ.2742 ಮೋಟಾರು ಬೈಕಿಗೆ ಡಿಕ್ಕಿ ಹೊಡೆಸಿದ ಪರಿಣಾಮ ಮೋಟಾರು ಬೈಕನ್ನು ಚಾಲನೆ ಮಾಡುತ್ತಿದ್ದ ಶ್ರೀ ಓಂಕಾರಸ್ವಾಮಿ ರವರ ಎಡಕಾಲು, ಹಣೆ ಹಾಗೂ ಎದೆಗೆ ತೀವ್ರ ಸ್ವರೂಪದ ಗಾಯಗಳಾಗಿ ಚಿಕಿತ್ಸೆ ಫಲಕಾರಿಯಾಗದೆ ಮೃತಪಟ್ಟಿರುತ್ತಾರೆ. ಈ ರೀತ್ಯ ಆರೋಪಿಯಾದ ನೀವು ಭಾರತ ದಂಡ ಸಂಹಿತೆ ಕಲಂ 304(ಎ) ರ ಅನ್ವಯ ದಂಡನೀಯವಾದ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆಯದೊಳಗೆ ಮಾಡಿರುತ್ತೀರಿ ಎಂದು ಆಪಾದಿಸಲಾಗಿದೆ.

**ಪ್ರಶ್ನೆ:1–** ಈಗ ಮೇಲೆ ಓದಿ ಹೇಳಿದ ಆಪಾದನೆಯನ್ನು ಕೇಳಿದ್ದೀರಾ? ಅದು ನಿಮಗೆ ಅರ್ಥವಾಯಿತೇ?

**ಉತ್ತರ:** Yes

**ಪ್ರಶ್ನೆ:2–** ನೀವು ಆಪಾದನೆಯನ್ನು ಒಪ್ಪಿಕೊಳ್ಳುವಿರೋ ಅಥವಾ ನಿಮಗೆ ಯಾವುದಾದರೂ ಪ್ರತಿರಕ್ಷಣೆ ಇದೆಯೇ ?

**ಉತ್ತರ:** Pleaded not guilty and claimed to be tried

(ಈ ಮೇಲ್ಕಂಡ ಅಪಾದನೆಯನ್ನು ನಾನೇ ಸ್ವತಃ ಆರೋಪಿಗೆ ಓದಿ ಹೇಳಿ, ಅವರು ಕೊಟ್ಟ ಉತ್ತರವನ್ನು ಬರೆದುಕೊಂಡಿದ್ದು, ಮೇಲೆ ಹೇಳಿರುವುದು ಸತ್ಯ ಹಾಗೂ ಸರಿಯಾಗಿದೆ ಎಂದು ದೃಢೀಕರಿಸುತ್ತೇನೆ.)

**ದಿನಾಂಕ: 10.07.2026.** **ಸಹಿ/–**

**(ರಾಹುಲ್ ಶೆಟ್ಟಿಗಾರ್)**
**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು**
**ಪ್ರ.ದ.ನ್ಯಾದಂ., ತರೀಕೆರೆ**

**ಆರೋಪಿಯ ಸಹಿ:** **ಸಂಚಾರಿ ನ್ಯಾಯಾಲಯ, ಅಜ್ಜಂಪುರ**